ಕರ್ನಾಟಕ ವಿಧಾನ ಸಭೆ, ಸಂಶೋಧನಾ ಹಾಗೂ ಉಲ್ಲೇಖನಾ ಶಾಖೆ
KARNATAKA LEGISLATIVE ASSEMBLY RESEARCH AND REFERENCE BRANCH

ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT: ವಿಧಾನ ಪರಿಷತ್ತಿನ ಅಧಿವೇಶನ

ಪತ್ರಿಕೆಯ ಹೆಸರು : NAME OF THE NEWS PAPER: ವಿಶ್ವವಾಣಿ ದಿನಾಂಕ : DATE : 12/3/2020

# ಪಠ್ಯದಲ್ಲಿ ಸಂವಿಧಾನವನ್ನು ಒಂದು ವಿಷಯುವಾಗಿ ಕಲಿಸಿ

ವಿಧಾನಪರಿಷತ್: ಭಾರತದ ಸಂವಿಧಾನವನ್ನು ಏಳನೇ ತರಗತಿಯಿಂದ ಹತ್ತನೇ ತರಗತಿ ವರೆಗೆ ಒಂದು ವಿಷಯವಾಗಿ ಕಲಿಸಬೇಕು ಎಂದು ಬಿಜೆಪಿ ಸದಸ್ಯ ವೈ.ಎ.ನಾರಾಯಣಸ್ವಾಮಿ ರಾಜ್ಯ ಸರಕಾರಕ್ಕೆ ಮನವಿ ಮಾಡಿದರು.

ಬುಧವಾರ ವಿಧಾನಪರಿಷತ್ತಿನಲ್ಲಿ ಸಂವಿಧಾನದ ಮೇಲೆ ನಡೆದ ವಿಶೇಷ ಚರ್ಚೆಯಲ್ಲಿ ಮಾತನಾಡಿ, ವಿವಿಧತೆಯಲ್ಲಿ ಏಕತೆ ಇರುವ ದೇಶದಲ್ಲಿ ಸಿದ್ಧಾಂತ ಮತ್ತು ಮೌಲ್ಯಗಳ ಮೇಲೆ ನಿಂತಿರುವ ಗ್ರಂಥ ಸಂವಿಧಾನ. ಈ ಸಂವಿಧಾನದ ಆಶಯಗಳು ಎಷ್ಟರ ಮಟ್ಟಿಗೆ ಸಾಕಾರವಾಗಿದೆ ಎಂಬುದು ಪ್ರಶ್ನೆಯಾಗಿದೆ. ಮೂಲಭೂತ ಹಕ್ಕುಗಳ ಬಗ್ಗೆ ಮಾತನಾಡುವಷ್ಟು ಮೂಲಭೂತ ಕರ್ತವ್ಯಗಳ ಬಗ್ಗೆ ಮಾತನಾಡುವುದಿಲ್ಲ. ಈ ಬಗ್ಗೆ ನಮ್ಮನ್ನು ನಾವೇ ಪ್ರಶ್ನಿಸಿಕೊಳ್ಳಬೇಕು ಎಂದು ತಿಳಿಸಿದರು.

ಸಂವಿಧಾನ ರಚನೆಯಾಗಿ 70 ವರ್ಷ ಕಳೆದರೂ ಸೋಗಲಾಡಿತನ ಪ್ರದರ್ಶಿಸುತ್ತಿದ್ದೇವೆ. ಇಂತಹ ಅದ್ಭುತ ಸಂವಿಧಾನ ನೀಡಿದ ಡಾ.ಬಿ.ಆರ್.ಅಂಬೇಡ್ಕರ್ ಅವರನ್ನು ಯಾವ ರೀತಿ ನಡೆಸಿಕೊಂಡಿದ್ದೇವೆ ಎಂಬುದರ ಬಗ್ಗೆ ಚರ್ಚೆಯ ಅಗತ್ಯವಿದೆ. 10 ವರ್ಷಕ್ಕೆ ಮೀಸಲಾಗಿದ್ದ ಮೀಸಲಾತಿಯನ್ನು 70 ವರ್ಷವಾದರೂ ಮುಂದುವರೆಸಿದ್ದೇವೆ. ಹಾಗೆಂದು ಮೀಸಲಾತಿಗೆ ತಮ್ಮ ವಿರೋಧವಿಲ್ಲ. ಮೀಸಲಾತಿಯ ಆಶಯ ಸಮರ್ಪಕವಾಗಿ ಈಡೇರದ ಪರಿಣಾಮ ಇಂದಿಗೂ ಮುಂದುವರಿಸಲಾಗಿದೆ. ವೋಟ್ ಬ್ಯಾಂಕ್ ರಾಜಕಾರಣಕ್ಕೆ ಬಲಿಯಾಗಿ ಸಂವಿಧಾನದ ಆಶಯ ಈಡೇರಿಸುವಲ್ಲಿ ಹಿಂದೆ ಬಿದ್ದಿರುವ ಪರಿಣಾಮ ಇಂದು ಪಶ್ಚಾತ್ತಾಪದಿಂದ ಸಂವಿಧಾನದ ಬಗ್ಗೆ ಮಾತನಾಡುತ್ತಿದ್ದೇವೆ ಎಂದು ಹೇಳಿದರು.

ಈ ಮಧ್ಯ ಪ್ರವೇಶಿಸಿ ಮಾತನಾಡಿದ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಅವರು, ಮೀಸಲಾತಿಯ ಗುರಿ ಮುಟ್ಟುವಲ್ಲಿ ವಿಫಲವಾಗಲು ರಾಜಕಾರಣಿಗಳ ಮನಸ್ಥಿತಿಯೇ ಕಾರಣ. ಮೀಸಲಾತಿ ಬಂದು 70 ವರ್ಷ ಕಳೆದರೂ ಶೇ.100ರಷ್ಟು ಅನುಷ್ಠಾನವಾಗಿಲ್ಲ. ಇದಕ್ಕೆ ಈ 70 ವರ್ಷದಲ್ಲಿ ಆಡಳಿತ ಮಾಡಿದ ಎಲ್ಲರೂ ಜವಾಬ್ದಾರರೇ. 900 ವರ್ಷಗಳ ಹಿಂದೆ ಬಸಣ್ಣನವರು ತಮ್ಮ ಅನುಭವ ಮಂಟಪದಲ್ಲಿ ಮಹಿಳೆಯರಿಗೆ ಮೀಸಲಾತಿ ನೀಡಿದ್ದರು. ಇಂದು ನಾವು ಕೇವಲ ಭಾಷಣಕ್ಕೆ ಸೀಮಿತರಾಗಿದ್ದೇವೆ ಎಂದು ಬೇಸರ ವ್ಯಕ್ತಪಡಿಸಿದರು.